## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಡಾ. ಸರೋಜಿನಿ ಮಹಿಷಿ ಸಮಿತಿ ಮತ್ತು ಕನ್ನಡಿಗರ ಉದ್ಯೋಗ ಸಮಿತಿಯು ಸಲ್ಲಿಸಿರುವ ವರದಿಗಳಲ್ಲಿರುವ ಶಿಫಾರಸುಗಳ ಬಗ್ಗೆ ಸಚಿವ ಸಂಪುಟದ ಉಪ ಸಮಿತಿಯು ಮಾಡಿರುವ ಶಿಫಾರಸುಗಳನ್ನು ಜಾರಿಗೊಳಿಸುವುದನ್ನು ನೋಡಿಕೊಳ್ಳಲು ಅಧಿಕಾರಿಗಳ ಉನ್ನತ ಮಟ್ಟದ ಸಮಿತಿಯನ್ನು ರಚಿಸುವ ಬಗ್ಗೆ.

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 55 ಸೇಸ್ಥಅ 90, ಬೆಂಗಳೂರು,
ದಿನಾಂಕ: 13–12–1990

### ಆದೇಶ

1. ಡಾ. ಸರೋಜಿನಿ ಮಹಿಷಿ ಸಮಿತಿಯು ಸರ್ಕಾರಕ್ಕೆ ಸಲ್ಲಿಸಿದ್ದ ವರದಿಯಲ್ಲಿರುವ ಶಿಫಾರಸುಗಳನ್ನು ಪರಿಶೀಲಿಸಿ ಆ ಶಿಫಾರಸುಗಳ ಬಗ್ಗೆ ಸಚಿವ ಸಂಪುಟದ ಉಪ ಸಮಿತಿಯು ಮಾಡಿರುವ ಶಿಫಾರಸುಗಳನ್ನು ಸರ್ಕಾರವು ಅಂಗೀಕರಿಸಿ ಮತ್ತು ಅನುಮೋದಿಸಿ ಆದೇಶ ಸಂಖ್ಯೆ: ಸಿಆಸುಇ 9 ಎಸ್‌ಎಲ್‌ಸಿ 90, ದಿನಾಂಕ: 23–11–90ನ್ನು ಹೊರಡಿಸಲಾಗಿದೆ.

2. ಮೇಲಿನ ಶಿಫಾರಸುಗಳನ್ನು ಜಾರಿಗೊಳಿಸುವುದನ್ನು ನೋಡಿಕೊಳ್ಳಲು ಕೆಳಗೆ ನಮೂದಿಸಿರುವ ಅಧಿಕಾರಿಗಳ ಒಂದು ಉನ್ನತ ಮಟ್ಟದ ಸಮಿತಿಯನ್ನು ಸರ್ಕಾರವು ರಚಿಸಿದೆ.

| | |
|---|---|
| 1. ಮುಖ್ಯ ಕಾರ್ಯದರ್ಶಿಗಳು | ಅಧ್ಯಕ್ಷರು |
| 2. ಯೋಜನಾ ಆಯುಕ್ತರು ಮತ್ತು ಸರ್ಕಾರದ ಕಾರ್ಯದರ್ಶಿಗಳು ಯೋಜನಾ ಇಲಾಖೆ. | ಸದಸ್ಯರು |
| 3. ಹಣಕಾಸು ಆಯುಕ್ತರು ಮತ್ತು ಸರ್ಕಾರದ ಕಾರ್ಯದರ್ಶಿಗಳು–1 ಹಣಕಾಸು ಇಲಾಖೆ. | ಸದಸ್ಯರು |
| 4. ಸರ್ಕಾರದ ಕಾರ್ಯದರ್ಶಿಗಳು–1 ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ. | ಸದಸ್ಯರು |
| 5. ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಮತ್ತು ಕಾರ್ಮಿಕ ಇಲಾಖೆ. | ಸದಸ್ಯರು |
| 6. ಮಹಾ ನಿರ್ದೇಶಕರು, ಕರ್ನಾಟಕ ರಾಜ್ಯ ಸಾರ್ವಜನಿಕ ಉದ್ದಿಮೆಗಳ ಮಹೋದ್ಯಮ, ಬೆಂಗಳೂರು. | ಸದಸ್ಯರು |
| 7. ಸರ್ಕಾರದ ಅಪರ ಕಾರ್ಯದರ್ಶಿಗಳು, ಸಿ. ಆ. ಸು. ಇಲಾಖೆ. | ಸದಸ್ಯರು |

3. ಈ ಉನ್ನತ ಮಟ್ಟದ ಉಪ ಸಮಿತಿಯು ನಾಲ್ಕು ತಿಂಗಳಿಗೊಮ್ಮೆ ಸಭೆ ಸೇರಿ ಶಿಫಾರಸುಗಳನ್ನು ಜಾರಿಗೊಳಿಸುವುದನ್ನು ಪುನರವಲೋಕಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
ಸಹಿ.
**(ಕೆ.ಕೆ. ನಾಡ್‌ಗೀರ್)**
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು).